All India Radio: Bangalore
National Bulletin In Kannada
28.09.2025 7.35 a.m.
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

<><><><>

ಮುಖ್ಯಾಂಶಗಳು

೧. ೧೨೬ನೇ ಆವೃತ್ತಿಯ 'ಮನ್ ಕಿ ಬಾತ್'ನಲ್ಲಿಂದು ಭಾರತೀಯ ಸಮುದಾಯದೊಂದಿಗೆ ಪ್ರಧಾನಿ ನರೇಂದ್ರ ಮೋದಿ ಮನದಾಳದ ಮಾತು

೨. ತಮಿಳುನಾಡಿನ ಕರೂರಿನ ರಾಜಕೀಯ ರ್‍ಯಾಲಿಯಲ್ಲಿ ಸಂಭವಿಸಿದ ಕಾಲ್ತುಳಿತದಲ್ಲಿ ಮೃತಪಟ್ಟವರ ಸಂಖ್ಯೆ ೩೯ ಕ್ಕೆ ಏರಿಕೆ

೩. ಪಹಲ್ಗಾಮ್ ದಾಳಿಯ ರೂವಾರಿಗಳ ವಿರುದ್ಧ ಕಾನೂನು ಕ್ರಮ- ವಿಶ್ವಸಂಸ್ಥೆಯ ಸಾಮಾನ್ಯ ಸಭೆಯಲ್ಲಿ ವಿದೇಶಾಂಗ ಸಚಿವ ಡಾ. ಎಸ್.ಜೈಶಂಕರ್

೪. ಏಷ್ಯಾ ಕಪ್ ಟಿ೨೦ ಕ್ರಿಕೆಟ್: ಫೈನಲ್ ಪಂದ್ಯದಲ್ಲಿಂದು ಭಾರತ-ಪಾಕಿಸ್ತಾನ ಮುಖಾಮುಖಿ

><><><><><><><

ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ 'ಮನ್ ಕಿ ಬಾತ್'ನಲ್ಲಿ ಇಂದು ಬೆಳಗ್ಗೆ ೧೧ ಗಂಟೆಗೆ ಪ್ರಧಾನಿ ನರೇಂದ್ರ ಮೋದಿ, ದೇಶ-ವಿದೇಶಗಳಲ್ಲಿರುವ ಭಾರತೀಯ ಸಮುದಾಯದೊಂದಿಗೆ ತಮ್ಮ ಮನದಾಳದ ಮಾತುಗಳನ್ನು ಹಂಚಿಕೊಳ್ಳಲಿದ್ದಾರೆ. ಇದು 'ಮನ್ ಕಿ ಬಾತ್' ಕಾರ್ಯಕ್ರಮದ ೧೨೬ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳು, ಎಐಆರ್ ನ್ಯೂಸ್ ಜಾಲತಾಣ, ನ್ಯೂಸ್ ಆನ್ ಏರ್ ಮೊಬೈಲ್ ಆಪ್‌ನಲ್ಲಿ

ಪ್ರಸಾರವಾಗಲಿದೆ. ಹಿಂದಿ ಅವತರಣಿಕೆಯ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಈ ಕಾರ್ಯಕ್ರಮವನ್ನು ಕೇಳಬಹುದಾಗಿದೆ.

<><><><><><

ಪ್ರಧಾನಿ ನರೇಂದ್ರ ಮೋದಿ ಒಡಿಶಾದ ಜರ್ಸುಗುಡದಿಂದ ೬೦ ಸಾವಿರ ಕೋಟಿ ರೂಪಾಯಿಗೂ ಅಧಿಕ ಮೌಲ್ಯದ ವಿವಿಧ ಅಭೀವೃದ್ಧಿ ಯೋಜನೆಗಳಿಗೆ ಶಿಲಾನ್ಯಾಸ ಹಾಗೂ ಉದ್ಘಾಟನೆ ನೆರವೇರಿಸಿದರು. ದೂರಸಂಪರ್ಕ, ರೈಲ್ವೆ, ಉನ್ನತ ಶಿಕ್ಷಣ, ಆರೋಗ್ಯ ಸೇವೆ, ಕೌಶಲ್ಯಾಭಿವೃದ್ಧಿ, ಗ್ರಾಮೀಣಾ ವಸತಿ ವಲಯ ಸೇರಿದಂತೆ ವಿವಿಧ ಪ್ರಮುಖ ಯೋಜನೆಗಳು ಇದರಲ್ಲಿ ಸೇರಿವೆ. ಪ್ರಧಾನಿಯವರು ಇದೇ ಸಂದರ್ಭದಲ್ಲಿ ಒಡಿಶಾದ ಬೆಹರಾಂಪುರ್ ಹಾಗೂ ಗುಜರಾತ್‌ನ ಉಧ್ನಾ ನಡುವಿನ ಅಮೃತ್ ಭಾರತ್ ಎಕ್ಸ್‌ಪ್ರೆಸ್ ರೈಲು ಸಂಚಾರಕ್ಕೆ ಹಸಿರು ನಿಶಾನೆ ತೋರಿದರು. ಒಡಿಶಾ ರಾಜ್ಯಪಾಲ ಹರಿಬಾಬು, ಕಂಬಮ್‌ಪತಿ ಮುಖ್ಯಮಂತ್ರಿ ಮೋಹನ್ ಚರಣ್ ಮಾಝಿ, ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು. ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಹಾಗೂ ಜಲಶಕ್ತಿ ಖಾತೆ ಸಚಿವ ಸಿ.ಆರ್.ಪಾಟೀಲ್, ಉಧ್ನಾ ರೈಲು ನಿಲ್ದಾಣದಲ್ಲಿ ಉಪಸ್ಥಿತರಿದ್ದು, ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರು. ಈ ರೈಲು ಒಡಿಶಾ, ಆಂಧ್ರಪ್ರದೇಶ, ಛತ್ತೀಸ್‌ಗಢ, ಮಹಾರಾಷ್ಟ್ರ ಮೂಲಕ ಗುಜರಾತ್ ತಲುಪಲಿದೆ.

><><><><><><

ತಮಿಳುನಾಡಿನ ಕರೂರಿನಲ್ಲಿ ನಡೆದ ರಾಜಕೀಯ ರ್‍ಯಾಲಿಯಲ್ಲಿ ಸಂಭವಿಸಿದ ಕಾಲ್ತುಳಿತದಲ್ಲಿ ಸಾವನ್ನಪ್ಪಿದವರ ಸಂಖ್ಯೆ ೩೯ ಕ್ಕೆ ಏರಿದೆ. ವಿವಿಧ ಆಸ್ಪತ್ರೆಗಳಲ್ಲಿ ಗಾಯಗೊಂಡ ೫೦ ಕ್ಕೂ ಹೆಚ್ಚು ಜನರು ಚಿಕಿತ್ಸೆ ಪಡೆಯುತ್ತಿದ್ದಾರೆ. ಈ ಪೈಕಿ ೨೩ ಜನರ ಸ್ಥಿತಿ ಗಂಭೀರವಾಗಿದೆ. ನಿನ್ನೆ ಸಂಭವಿಸಿದ

ಕಾಲ್ತುಳಿತದಲ್ಲಿ ಪ್ರಾಣ ಕಳೆದುಕೊಂಡವರ ಕುಟುಂಬಗಳಿಗೆ ತಮಿಳುನಾಡು ಮುಖ್ಯಮಂತ್ರಿ ಎಂ.ಕೆ.ಸ್ಟಾಲಿನ್ ಹತ್ತು ಲಕ್ಷ ರೂಪಾಯಿ ಪರಿಹಾರ ಘೋಷಿಸಿದ್ದಾರೆ. ಐಸಿಯುನಲ್ಲಿ ಚಿಕಿತ್ಸೆ ಪಡೆಯುತ್ತಿರುವವರಿಗೆ ಒಂದು ಲಕ್ಷ ರೂಪಾಯಿ ನೀಡಲಾಗುವುದು. ಘಟನೆಯ ತನಿಖೆಗಾಗಿ ನಿವೃತ್ತ ಹೈಕೋರ್ಟ್ ನ್ಯಾಯಮೂರ್ತಿ ಅರುಣಾ ಜಗದೀಶನ್ ನೇತೃತ್ವದ ಏಕ ಸದಸ್ಯರ ಆಯೋಗ ರಚಿಸಲಾಗಿದೆ ಎಂದು ಮುಖ್ಯಮಂತ್ರಿ ಎಂ.ಕೆ.ಸ್ಟಾಲಿನ್ ತಿಳಿಸಿದ್ದಾರೆ. ನಟ-ರಾಜಕಾರಣಿ ವಿಜಯ್ ಅವರ ತಮಿಳಗ ವೆಟ್ರಿ ಕಳಗಂ ಈ ರ್‍ಯಾಲಿಯನ್ನು ಆಯೋಜಿಸಿತ್ತು. ಘಟನೆ ಕುರಿತು ನಟ ವಿಜಯ್ ತೀವ್ರ ಆಘಾತ ವ್ಯಕ್ತಪಡಿಸಿದ್ದಾರೆ ಮತ್ತು ಮೃತರ ಕುಟುಂಬಕ್ಕೆ ತೀವ್ರ ಸಂತಾಪ ಸೂಚಿಸಿದ್ದಾರೆ. ಕಾಲ್ತುಳಿತದಲ್ಲಿ ಸಂಭವಿಸಿದ ದುರಂತ ಜೀವಹಾನಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಅನೇಕ ಗಣ್ಯರು ದುಃಖ ವ್ಯಕ್ತಪಡಿಸಿದ್ದಾರೆ. ಕರೂರ್ ಕಾಲ್ತುಳಿತದ ಬಗ್ಗೆ ವಿವರವಾದ ವರದಿಯನ್ನು ಸಲ್ಲಿಸುವಂತೆ ಕೇಂದ್ರ ಗೃಹ ಸಚಿವಾಲಯ, ತಮಿಳುನಾಡು ಸರ್ಕಾರಕ್ಕೆ ನಿರ್ದೇಶನ ನೀಡಿದೆ. ತಮಿಳುನಾಡಿನ ಕರೂರ್‌ನಲ್ಲಿ ಕಾಲ್ತುಳಿತ ಘಟನೆ ಯಾವ ಸಂದರ್ಭದಲ್ಲಿ ಸಂಭವಿಸಿತು ಹಾಗೂ ದುರಂತದ ನಂತರ ಕೈಗೊಂಡ ಪರಿಹಾರ ಮತ್ತು ರಕ್ಷಣಾ ಕ್ರಮಗಳ ಬಗ್ಗೆ ವಿವರಗಳನ್ನು ನೀಡುವಂತೆ ಕೇಂದ್ರ ಗೃಹ ಸಚಿವಾಲಯ, ತಮಿಳುನಾಡು ಸರ್ಕಾರಕ್ಕೆ ನಿರ್ದೇಶಿಸಿದೆ.

><><><><><><

ಜಾಗತಿಕ ಭಯೋತ್ಪಾದನೆಯ ಕೇಂದ್ರಬಿಂದುವಾಗಿರುವ ನೆರೆಯ ರಾಷ್ಟ್ರವನ್ನು ಭಾರತ ಹೊಂದಿದ್ದು, ಸ್ವಾತಂತ್ರ್ಯದ ನಂತರ ಭಯೋತ್ಪಾದನೆಯ ಸವಾಲನ್ನು ಎದುರಿಸಿದೆ ಎಂದು ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಹೇಳಿದ್ದಾರೆ.ವಿಶ್ವಸಂಸ್ಥೆಯ ಸಾಮಾನ್ಯ ಸಭೆಯ ೮೦ ನೇ ಅಧಿವೇಶನದ

ಚರ್ಚೆಯಲ್ಲಿ ಮಾತನಾಡಿದ ಡಾ. ಜೈಶಂಕರ್, ದಶಕಗಳಿಂದ, ಪ್ರಮುಖ ಅಂತಾರಾಷ್ಟ್ರೀಯ ಭಯೋತ್ಪಾದಕ ದಾಳಿಗಳು ಆ ಒಂದು ದೇಶಕ್ಕೆ ಸಂಬಂಧಿಸಿವೆ. ವಿಶ್ವಸಂಸ್ಥೆಯ ಪಟ್ಟಿ ಮಾಡಿರುವ ಭಯೋತ್ಪಾದಕರಲ್ಲಿ ಆ ದೇಶದ ಪ್ರಜೆಗಳಿಂದ ತುಂಬಿವೆ ಎಂದರು. ಈ ವರ್ಷದ ಏಪ್ರಿಲ್‌ನಲ್ಲಿ ಪಹಲ್ಗಾಮ್‌ನಲ್ಲಿ ನಡೆದ ಮುಗ್ಧ ಪ್ರವಾಸಿಗರ ಹತ್ಯೆಯ ಉದಾಹರಣೆಯನ್ನು ಅವರು ನೀಡಿದರು. ಭಯೋತ್ಪಾದನೆಯ ವಿರುದ್ಧ ತನ್ನ ಜನರನ್ನು ರಕ್ಷಿಸುವ ಹಕ್ಕನ್ನು ಭಾರತ ಚಲಾಯಿಸಿದೆ ಹಾಗೂ ಈ ದಾಳಿಯ ರೂವಾರಿಗಳು ಮತ್ತು ಅಪರಾಧಿಗಳನ್ನು ಕಾನೂನಿನ ಕ್ರಮಕ್ಕೆ ಒಳಪಡಿಸಿದೆ ಎಂದು ಸಚಿವ ಡಾ. ಎಸ್. ಜೈಶಂಕರ್ ಹೇಳಿದರು.

ಧ್ವನಿ: ಜೈಶಂಕರ್(೨೬ ಸೆಕೆಂಟ್)

ನಂತರ ಅವರು ವಿಶ್ವಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಆಂಟೋನಿಯೊ ಗುಟೆರೆಸ್ ಅವರನ್ನು ಭೇಟಿಯಾದರು. ಈ ವೇಳೆ ಅವರು ಪ್ರಸ್ತುತ ಜಾಗತಿಕ ವಿಷಯಗಳು ಮತ್ತು ಭಾರತದ ದೃಷ್ಟಿಕೋನಗಳ ಕುರಿತು ಚರ್ಚೆ ನಡೆಸಿದರು. ಬಳಿಕ ಸಚಿವ ಡಾ. ಎಸ್.ಜೈಶಂಕರ್, ವಿಶ್ವಸಂಸ್ಥೆಯ ಸಾಮಾನ್ಯ ಸಭೆಯ ೮೦ನೇ ಅಧಿವೇಶನದ ಅಧ್ಯಕ್ಷೆ ಅನ್ನಾಲೆನಾ ಬೇರ್‌ಬಾಕ್ ಅವರನ್ನು ಭೇಟಿಯಾದರು. ಬೇರ್‌ಬಾಕ್ ಅವರ ಅಧ್ಯಕ್ಷತೆಗೆ ಭಾರತದ ಸಂಪೂರ್ಣ ಬೆಂಬಲವನ್ನು ಅವರು ವ್ಯಕ್ತಪಡಿಸಿದರು. ನಂತರ ಅವರು ಸೌದಿ ಅರೇಬಿಯಾ ವಿದೇಶಾಂಗ ಸಚಿವ ಫೈಸಲ್ ಬಿನ್ ಫರ್ಹಾನ್ ಮತ್ತು ಅಲ್ಜೀರಿಯಾ ವಿದೇಶಾಂಗ ಸಚಿವ ಅಹ್ಮದ್ ಅತ್ತಾಫ್ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು.

><><><><><><

ಏಪ್ರಿಲ್ ೨೨ ರಂದು ಜಮ್ಮು-ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಉಗ್ರಗಾಮಿ ದಾಳಿಯನ್ನು ಬ್ರಿಕ್ಸ್ ವಿದೇಶಾಂಗ ಸಚಿವರು ಅತ್ಯಂತ ಕಠೋರ ಶಬ್ದಗಳಲ್ಲಿ ಖಂಡಿಸಿದ್ದಾರೆ. ವಿಶ್ವಸಂಸ್ಥೆ ಸಾಮಾನ್ಯ ಸಭೆಯ ೮೦ನೇ ಅಧಿವೇಶನದ ಹಿನ್ನೆಲೆಯಲ್ಲಿ ಬ್ರಿಕ್ಸ್ ವಿದೇಶಾಂಗ ಸಚಿವರು ವಾರ್ಷಿಕ ಸಭೆ ನಡೆಸಿದರು. ೨೦೨೬ರ ಬ್ರಿಕ್ಸ್ ಅಧ್ಯಕ್ಷತೆಯನ್ನು ಭಾರತ ವಹಿಸಲಿರುವ ಹಿನ್ನೆಲೆಯಲ್ಲಿ ನಿನ್ನೆಯ ಸಭೆಯ ಅಧ್ಯಕ್ಷತೆ ಭಾರತದ ನೇತೃತ್ವದಲ್ಲಿ ನಡೆಯಿತು. ಭಯೋತ್ಪಾದನೆಯ ವರ್ತನೆ ಯಾರಿಂದಲೇ ಆಗಲಿ, ಯಾವಾಗಲೇ ಆಗಲಿ, ಯಾವುದೇ ಉದ್ದೇಶಗಳನ್ನು ಇಟ್ಟುಕೊಂಡು ಮಾಡಿದರೂ ಅದು ಅಪರಾಧ, ನ್ಯಾಯಸಮ್ಮತವಲ್ಲದ ವರ್ತನೆ ಎಂದು ಜಂಟಿ ಹೇಳಿಕೆಯಲ್ಲಿ ತಿಳಿಸಲಾಗಿದೆ.

><><><><><><

ಹಿಮಾಚಲ ಪ್ರದೇಶದ ಶೀತ ಮರುಭೂಮಿ ಜೈವಿಕ ಮೀಸಲು ಪ್ರದೇಶವನ್ನು ಯುನೆಸ್ಕೋ ವಿಶ್ವ ಜೈವಿಕ ಮೀಸಲು ಪಟ್ಟಿಗೆ ಸೇರಿಸಲಾಗಿದೆ. ಚೀನಾದ ಹ್ಯಾಂಗ್‌ಝೌನಲ್ಲಿ ನಡೆದ ವಿಶ್ವ ಜೈವಿಕ ಮೀಸಲು ಸಮಾವೇಶದಲ್ಲಿ ಈ ಘೋಷಣೆ ಮಾಡಲಾಯಿತು. ಇದು ಸುಸ್ಥಿರ ಅಭಿವೃದ್ಧಿಗೆ ಮಾದರಿಯಾಗಿ ಈ ಪ್ರದೇಶದ ಮೌಲ್ಯವನ್ನು ಒತ್ತಿ ಹೇಳುತ್ತದೆ. ೨೦೦೯ ರಲ್ಲಿ ಮೊದಲು ರಾಷ್ಟ್ರೀಯ ಜೈವಿಕ ಮೀಸಲು ಎಂದು ಗೊತ್ತುಪಡಿಸಿದ ಶೀತ ಮರುಭೂಮಿ ಈಗ ಜಾಗತಿಕ ಪಟ್ಟಿಯಲ್ಲಿ ಭಾರತದ ೧೩ ನೇ ತಾಣವಾಗಿದೆ. ಇದು ಪಿನ್ ವ್ಯಾಲಿ ರಾಷ್ಟ್ರೀಯ ಉದ್ಯಾನವನ ಮತ್ತು ಕಿಬ್ಬರ್ ವನ್ಯಜೀವಿ ಅಭಯಾರಣ್ಯದಂತಹ ಸಂರಕ್ಷಿತ ಪ್ರದೇಶಗಳನ್ನು ಒಳಗೊಂಡಿದೆ ಮತ್ತು ಸುಮಾರು ೧೨ ಸಾವಿರ ಜನರಿಗೆ ನೆಲೆಯಾಗಿದೆ.

><><><><><><

ಕ್ರಾಂತಿಕಾರಿ ಸ್ವಾತಂತ್ರ್ಯ ಹೋರಾಟಗಾರ ಭಗತ್ ಸಿಂಗ್ ಅವರ ೧೧೮ ನೇ ಜನ್ಮ ದಿನಾಚರಣೆಯಂದು ಇಂದು ದೇಶವು ಅವರಿಗೆ ಗೌರವ ನಮನ ಸಲ್ಲಿಸುತ್ತಿದೆ. ೧೯೦೭ ರಲ್ಲಿ ಈ ದಿನದಂದು, ಭಗತ್ ಸಿಂಗ್ ಅವರು ಈಗಿನ ಪಾಕಿಸ್ತಾನದಲ್ಲಿರುವ ಪಂಜಾಬ್‌ನ ಲ್ಯಾಲ್ಪುರ್ ಜಿಲ್ಲೆಯ ಬಂಗಾ ಗ್ರಾಮದಲ್ಲಿ ಜನಿಸಿದರು. ಕ್ರಾಂತಿಕಾರಿಗಳ ಹಿನ್ನಲೆಯುಳ್ಳ ಕುಟುಂಬದಲ್ಲಿ ಭಗತ್ ಸಿಂಗ್ ಜನಿಸಿದ್ದರು. ಏಳು ಮಂದಿ ಒಡಹುಟ್ಟಿದವರಲ್ಲಿ ಅವರು ಎರಡನೆಯವರಾಗಿದ್ದು, ಅವರನ್ನು ಪ್ರೀತಿಯಿಂದ 'ಭಗನ್‌ವಾಲಾ' ಎಂದು ಕರೆಯುತ್ತಿದ್ದರು. 'ಭಗನ್‌ವಾಲಾ' ಎಂದರೆ ಅದೃಷ್ಟಶಾಲಿ ಎಂದರ್ಥ. ಇಂದು ಶಹೀದ್ ಭಗತ್ ಸಿಂಗ್ ನಗರದಲ್ಲಿ ಅವರ ಗ್ರಾಮವಾದ ಖಟ್ಕರ್ ಕಲಾನ್‌ನಲ್ಲಿ ರಾಜ್ಯಮಟ್ಟದ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ. ಈ ಸಂದರ್ಭದಲ್ಲಿ ೧೦೦ ಅಡಿ ಎತ್ತರದ ಹೊಸದಾಗಿ ಸ್ಥಾಪಿಸಲಾದ ಧ್ವಜಸ್ತಂಭದಲ್ಲಿ ರಾಷ್ಟ್ರಧ್ವಜವನ್ನು ಸಹ ಹಾರಿಸಲಾಗುವುದು.

><><><><><><

ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಇಂದು ಬಿಹಾರಕ್ಕೆ ಒಂದು ದಿನದ ಭೇಟಿ ನೀಡಲಿದ್ದಾರೆ. ಉಪರಾಷ್ಟ್ರಪತಿ ಅವರು ಇಂದು ಬೆಳಗ್ಗೆ ಪಾಟ್ನಾದ ಜಯಪ್ರಕಾಶ್ ಗೋಲಾಂಬರ್‌ನಲ್ಲಿ ಲೋಕನಾಯಕ ಜಯಪ್ರಕಾಶ್ ನಾರಾಯಣ್ ಅವರಿಗೆ ಪುಷ್ಪ ನಮನ ಸಲ್ಲಿಸಲಿದ್ದಾರೆ. ನಂತರ ಅವರು ಸಾಹಿತ್ಯ ಅಕಾಡೆಮಿ ಕಾರ್ಯಕ್ರಮವಾದ ಉನ್ಮೇಶ್‌ನ ಮೂರನೇ ಆವೃತ್ತಿಯ ಸಮಾರೋಪ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ಏಷ್ಯಾದ ಅತಿದೊಡ್ಡ ಸಾಹಿತ್ಯ ಉತ್ಸವಗಳಲ್ಲಿ ಒಂದೆಂದು ಖ್ಯಾತಿಯಾದ ಈ ಕಾರ್ಯಕ್ರಮವು ಭಾರತ ಮತ್ತು ವಿದೇಶಗಳಿಂದ ೯೦ ಕ್ಕೂ ಹೆಚ್ಚು ಭಾಷೆಗಳು ಮತ್ತು ಉಪಭಾಷೆಗಳನ್ನು ಪ್ರತಿನಿಧಿಸುವ ೭೦೦ ಕ್ಕೂ ಹೆಚ್ಚು ಸಾಹಿತಿಗಳು, ಕಲಾವಿದರು ಮತ್ತು

ರಂಗಭೂಮಿ ವ್ಯಕ್ತಿಗಳನ್ನು ಒಟ್ಟುಗೂಡಿಸಲಿದೆ. ಉಪರಾಷ್ಟ್ರಪತಿಯವರು ಮಧ್ಯಾಹ್ನ ಮುಜಾಫರ್‌ಪುರದ ಕತ್ರಾದಲ್ಲಿರುವ ಚಾಮುಂಡಾ ದೇವಿ ದೇವಸ್ಥಾನಕ್ಕೆ ಭೇಟಿ ನೀಡಲಿದ್ದಾರೆ.

><><><><><><

ಯುನೈಟೆಡ್ ಅರಬ್ ಎಮಿರೇಟ್ಸ್ ನಲ್ಲಿ ನಡೆಯುತ್ತಿರುವ ಏಷ್ಯಾ ಕಪ್ ಟಿ೨೦ ಕ್ರಿಕೆಟ್ ಪಂದ್ಯಾವಳಿಯ ಫೈನಲ್ ಪಂದ್ಯದಲ್ಲಿ ಇಂದು ಭಾರತ ಮತ್ತು ಪಾಕಿಸ್ತಾನ ತಂಡಗಳು ಮುಖಾಮುಖಿಯಾಗಲಿವೆ. ದುಬೈ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ನಡೆಯಲಿರುವ ಈ ಪಂದ್ಯ ಭಾರತೀಯ ಕಾಲಮಾನ ರಾತ್ರಿ ೮ಕ್ಕೆ ಆರಂಭವಾಗಲಿದೆ. ಸಾಂಪ್ರದಾಯಿಕ ಎದುರಾಳಿಗಳಾದ ಭಾರತ ಮತ್ತು ಪಾಕಿಸ್ತಾನ ತಂಡಗಳು ೪೧ ವರ್ಷಗಳ ಏಷ್ಯಾಕಪ್ ಕ್ರಿಕೆಟ್ ಪಂದ್ಯಾವಳಿಯ ಫೈನಲ್‌ನಲ್ಲಿ ಇದೇ ಮೊದಲ ಬಾರಿ ಎದುರಾಗುತ್ತಿವೆ.

><><><><><><

ಫುಟ್‌ಬಾಲ್‌ನಲ್ಲಿ, ಭಾರತ ತನ್ನ ಏಳನೇ ಎಸ್‌ಎಎಫ್‌ಎಫ್ ಅಂಡರ್ ೧೭ ಚಾಂಪಿಯನ್‌ಶಿಪ್ ಕಿರೀಟವನ್ನು ಗೆದ್ದುಕೊಂಡಿತು. ಕೊಲಂಬೊದಲ್ಲಿ ನಿನ್ನೆ ನಡೆದ ಫೈನಲ್ ಪಂದ್ಯದ ಪೆನಾಲ್ಟಿ ಶೂಟೌಟ್‌ನಲ್ಲಿ ಬಾಂಗ್ಲಾದೇಶವನ್ನು ೪-೧ ಗೋಲುಗಳಿಂದ ಸೋಲಿಸುವ ಮೂಲಕ ಭಾರತ ಪ್ರಶಸ್ತಿ ಮುಡಿಗೇರಿಸಿಕೊಂಡಿತು.

><><><><><><

ಮಾಜಿ ಸೈನಿಕರ ಕಲ್ಯಾಣ ಇಲಾಖೆ ಆಯೋಜಿಸಿರುವ ರಾಷ್ಟ್ರೀಯ ಸಮಾವೇಶವನ್ನು ರಕ್ಷಣಾ ಸಚಿವ ರಾಜನಾಥ್ ಸಿಂಗ್, ನಾಳೆ ಉದ್ಘಾಟಿಸಲಿದ್ದಾರೆ. ವಿಕಸಿತ ಭಾರತ ಮತ್ತು ಮಾಜಿ ಸೈನಿಕರ ಕಲ್ಯಾಣ ಕುರಿತು ೨ ದಿನಗಳ ಈ ಸಮಾವೇಶದಲ್ಲಿ ವಿಚಾರ ವಿನಿಮಯ ನಡೆಯಲಿದೆ.